...TIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ದಿನಾಂಕ : DATE : 29/8/2019

# ಪಾಲಿಕೆ ಬಿಜೆಪಿ ಬಜೆಟ್‌ಗೆ ಅಸ್ತು

## ಆಯವ್ಯಯಕ್ಕೆ ಸರ್ಕಾರ ಒಪ್ಪಿಗೆ | ಸದಸ್ಯರ 564 ಕೋಟಿ ಅನುದಾನ ಕಡಿತ

**ಬೆಂಗಳೂರು:** ಬಿಬಿಎಂಪಿಯ 2019-20ನೇ ಸಾಲಿನ ಬಜೆಟ್‌ಗೆ ರಾಜ್ಯ ಸರ್ಕಾರ ಬುಧವಾರ ಅನುಮೋದನೆ ನೀಡಿದೆ. ಈ ಹಿಂದೆ ನಗರಾಭಿವೃದ್ಧಿ ಇಲಾಖೆ ಅನುಮೋದನೆ ನೀಡಿದ್ದ 11,649 ಕೋಟಿ ರೂ. ಮೊತ್ತದ ಬಜೆಟ್‌ಗೆ ಅನುಮೋದನೆ ನೀಡಲಾಗಿದೆ.

ಆದರೆ, ಕಾಂಗ್ರೆಸ್-ಜೆಡಿಎಸ್‌ನ ಬಿಜೆಪಿ ಸದಸ್ಯರು ಹಾಗೂ ವಿಧಾನಸಭೆ ಸದಸ್ಯರಿಗೆ ಈ ಹಿಂದೆ ಬಜೆಟ್‌ನಲ್ಲಿ ನಿಗದಿಪಡಿಸಲಾಗಿದ್ದ ಅನುದಾನದಲ್ಲಿ ಕಡಿತಗೊಳಿಸಿ, ಅದನ್ನು ಬಿಜೆಪಿ ಸದಸ್ಯರಿಗೆ ವರ್ಗಾಯಿಸಲಾಗಿದೆ. ಬಿಬಿಎಂಪಿ ವ್ಯಾಪ್ತಿಗೆ ಬರುವ ಅನರ್ಹತೆಗೊಂಡಿರುವ ಶಾಸಕರ ಕ್ಷೇತ್ರಗಳಿಗೆ ಕೊಟ್ಟಿದ್ದ ಅನುದಾನದಲ್ಲಿ ಯಾವುದೇ ಬದಲಾವಣೆಯಾಗಿಲ್ಲ.

ಪಾಲಿಕೆಯ ಮೈತ್ರಿ ಆಡಳಿತ 2019-20ನೇ ಸಾಲಿನಲ್ಲಿ 12,958 ಕೋಟಿ ರೂ. ಮೊತ್ತದ ಭಾರೀ ಗಾತ್ರದ ಬಜೆಟ್ ಮಂಡಿಸಿತ್ತು. ನಗರಾಭಿವೃದ್ಧಿ ಇಲಾಖೆ, 1,308.89 ಕೋಟಿ ರೂ. ಕಡಿತಗೊಳಿಸಿ, 11,648.90 ಕೋಟಿ ರೂ.ಗೆ ಅನುಮೋದಿಸಿತ್ತು. ಇದಕ್ಕೆ ರಾಜ್ಯ ಸರ್ಕಾರ ಈಗ ಅನುಮೋದನೆ ನೀಡಿದ್ದು ಉಳಿದ 1,309 ಕೋಟಿ ರೂ.ಗೆ ತನ್ನ ಆದಾಯ ನೋಡಿಕೊಂಡು ಪೂರಕ ಬಜೆಟ್ ...

... ಬೊಮ್ಮನಹಳ್ಳಿಗೆ 30 ಕೋಟಿ ರೂ. ನೀಡಲಾಗಿದೆ. ಮಹದೇವಪುರ, ಬೆಂಗಳೂರು ದಕ್ಷಿಣಕ್ಕೆ ತಲಾ 20 ಕೋಟಿ ರೂ., ಸಿ.ವಿ.ರಾಮನ್‌ನಗರ, ಪದ್ಮನಾಭನಗರ, ಯಲಹಂಕ, ಚಿಕ್ಕಪೇಟೆ, ರಾಜಾಜಿನಗರ, ಮಲ್ಲೇಶ್ವರ ಕ್ಷೇತ್ರಗಳಿಗೆ ತಲಾ 10 ಕೋಟಿ ರೂ. ನಿಗದಿ ಮಾಡಲಾಗಿದೆ.

**ಆರ್ಥಿಕ ಹೊರೆ:** ಬಿಬಿಎಂಪಿ ವ್ಯಾಪ್ತಿಯಲ್ಲಿ ಈಗಾಗಲೇ ಪೂರ್ಣಗೊಂಡ ಬಾಕಿಯಿರುವ ಬಿಲ್ಲುಗಳ ಮೊತ್ತ 2,954.83 ಕೋಟಿ ರೂ.ಗಳಷ್ಟಿದೆ. ಜತೆಗೆ 4,167 ಕೋಟಿ ರೂ.ಗಳ ಮೊತ್ತದ ಕಾಮಗಾರಿ ಪ್ರಗತಿಯಲ್ಲಿದೆ. ಕಾರ್ಯಾದೇಶ ಪಡೆದು ಪ್ರಾರಂಭವಾಗಬೇಕಿರುವ ಕಾಮಗಾರಿಗಳ ಮೊತ್ತ 728.10 ಕೋಟಿ ರೂ.ಗಳಾಗಿದ್ದು ಕಾಮಗಾರಿ ಸಂಖ್ಯೆ ನೀಡಿ ಪ್ರಗತಿಯಲ್ಲಿರುವ ಕಾಮಗಾರಿಗಳ ಮೊತ್ತವು 1,996 ರೂ.ಗಳಷ್ಟಿದೆ. ಕಾಮಗಾರಿ ಸಂಖ್ಯೆ ನೀಡಲಾಗಿರುವ ಟೆಂಡರ್ ಕರೆಯಬೇಕಾಗಿರುವ ಕಾಮಗಾರಿಗಳ ಮೊತ್ತ 1,801.28 ಕೋಟಿ ರೂ. ಹಾಗೂ ಆಡಳಿತಾತ್ಮಕ ಅನುಮೋದನೆಗೊಂಡು ಕಾಮಗಾರಿ ಸಂಖ್ಯೆ ನೀಡಬೇಕಾಗಿರುವ ಮೊತ್ತ 1193.66 ಕೋಟಿ ರೂ. ಸೇರಿ ಒಟ್ಟು 12,841 ಕೋಟಿ ರೂ.ಗಳ ಮೊತ್ತವನ್ನು ಪಾವತಿಸಬೇಕಾಗಿದೆ. ಇವೆಲ್ಲವೂ ಹಿಂದಿನ ಬಜೆಟ್ ...

### ಅನರ್ಹತೆಗೊಂಡವರ ಅನುದಾನ ಸೇಫ್

ಅನರ್ಹತೆಗೊಂಡಿರುವ ಶಾಸಕರು ಪ್ರತಿನಿಧಿಸಿದ್ದ ರಾಜರಾಜೇಶ್ವರಿನಗರ, ಯಶವಂತಪುರ, ಮಹಾಲಕ್ಷ್ಮಿ ಲೇಔಟ್, ಕೆ.ಆರ್.ಪುರ, ಶಿವಾಜಿನಗರ ಕ್ಷೇತ್ರಗಳಿಗೆ ಈ ಹಿಂದೆ ನಿಗದಿಯಾಗಿದ್ದ 5 ಕೋಟಿ ರೂ. ಅನುದಾನದಲ್ಲಿ ಯಾವುದೇ ಬದಲಾವಣೆ ಮಾಡಿಲ್ಲ. ಆದರೆ, ಹೆಬ್ಬಾಳ, ವಿಜಯನಗರ, ಪುಲಕೇಶಿನಗರ, ಚಾಮರಾಜಪೇಟೆ, ಶಾಂತಿನಗರ, ಗಾಂಧಿನಗರ ಕ್ಷೇತ್ರಗಳಿಗೆ ಮೀಸಲಿರಿಸಿದ್ದ 5 ಕೋಟಿ ರೂ. ಅನುದಾನವನ್ನು 2 ಕೋಟಿಗೆ ಇಳಿಸಲಾಗಿದೆ.

### ಮೇಯರ್, ಉಪಮೇಯರ್ ಅನುದಾನವೂ ಕಡಿತ



ಮೇಯರ್ ಮತ್ತು ಉಪಮೇಯರ್ ಪ್ರತಿನಿಧಿಸುವ ವಾರ್ಡ್‌ಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ನಿಗದಿ ಮಾಡಲಾಗಿದ್ದ ಅನುದಾನದಲ್ಲೂ ಕಡಿತ ಮಾಡಲಾಗಿದ್ದು ಮೇಯರ್ ಗಂಗಾಂಬಿಕೆ ಪ್ರತಿನಿಧಿಸುವ ವಾರ್ಡ್‌ಗೆ ನೀಡಿದ್ದ 15 ಕೋಟಿ ರೂ. ಅನುದಾನವನ್ನು 5 ಕೋಟಿ ರೂ.ಗೆ ಮತ್ತು ಉಪಮೇಯರ್ ಭದ್ರೇಗೌಡರ ವಾರ್ಡ್‌ಗೆ ನೀಡಿದ್ದ 10 ಕೋಟಿ ರೂ.ಗಳನ್ನು 5 ಕೋಟಿ ರೂ.ಗೆ ಇಳಿಸಲಾಗಿದೆ. ಆಡಳಿತ ...

[redacted]